**ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ ರವರ ನ್ಯಾಯಾಲಯ, ಕೊಪ್ಪ**

**ಸಿ. ಸಿ. ನಂ.161/2025**

**ಪಿರ್ಯಾಧಿದಾರರು:** ಶ್ರೀ ಪೃಥ್ವಿರಾಜ್ ಎ.ಸಿ. ಬಿನ್ ಚಂದ್ರಶೇಖರ್ , 42 ವರ್ಷ, ವರ್ಕ್ ಶಾಪ್, ವಾಸ ಹಿರಿಕೆರೆ, ಕೊಪ್ಪ ಗ್ರಾಮಾಂತರ, ಕೊಪ್ಪ ಅಂಚೆ, ಚಿಕ್ಕಮಗಳೂರು ಜಿಲ್ಲೆ.

**-ವಿರುದ್ಧ -**

**ಆರೋಪಿ:** ಶ್ರೀ ರೂಪಾರಾಂ ಪಟೇಲ್ ಬಿನ್ ಪ್ರೋಕ್ ರಾಂ, 40 ವರ್ಷ, ವಯಸ್ಕರು, ವ್ಯಾಪಾರಿ, ಮಾಲೀಕರು: ನ್ಯೂ ರಾಂದೇವ್ ಟೆಕ್ಸ್ ಟೈಲ್ಸ್, ಮಹಾಮಯಿ ಕಾಂಪ್ಲೆಕ್ಸ್, ಬಸ್ ನಿಲ್ದಾಣದ ಹತ್ತಿರ, ಮುಖ್ಯ ರಸ್ತೆ, ಕೊಪ್ಪ ಅಂಚೆ ಮತ್ತು ತಾಲ್ಲೂಕು, ಚಿಕ್ಕಮಗಳೂರು.

- - - - -

**ಆರೋಪಣೆ**

ಆರೋಪಿಯಾದ ನೀವು ಪಿರ್ಯಾದುದಾರರಿಂದ ರೂ. 10,00,000/- ಗಳನ್ನು ಕೈ ಸಾಲವಾಗಿ ಪಡೆದುಕೊಂಡಿದ್ದು, ಸದರಿ ಸಾಲದ ಹಣದ ಬಾಬ್ತು ಅವರಿಗೆ ಚೆಕ್ ನಂ. **722077** ದಿನಾಂಕ 23.12.2024 ನ್ನು ನಮೂದಿಸಿದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಕೊಪ್ಪ ಶಾಖೆಯ ಒಂದು ಚೆಕ್ಕನ್ನು ನೀಡಿದ್ದು, ಪಿರ್ಯಾದಿದಾರರು ಸದರಿ ಚೆಕ್ ಅನ್ನು ಕೆನರಾ ಬ್ಯಾಂಕ್, ಕೊಪ್ಪ-ಕಡೂರು ಶಾಖೆಗೆ ಹಾಜರುಪಸಿದಾಗ "**ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲ**" ಎಂಬ ಹಿಂಬರಹದೊಂದಿಗೆ ನೀವು ಕೊಟ್ಟಂತ ಚೆಕ್ ವಾಪಸ್ಸಾಗಿದ್ದು ಸದರಿ ಚೆಕ್ ಅಮಾನ್ಯಗೊಂಡ ಬಗ್ಗೆ ನಿಮ್ಮ ಗಮನಕ್ಕೆ ದಿನಾಂಕ 17.01.2025 ರಂತೆ ವಕೀಲರ ಮುಖಾಂತರ ನೋಟೀಸು ನೀಡಿದ್ದು, ಸದರಿ ನೋಟಿಸು ದಿನಾಂಕ 18.01.2025 ರಂದು ಜಾರಿಯಾಗಿದಾಗ್ಯೂ ಸಹ ನೀವು ಚೆಕ್ ಬಾಬ್ತು ಹಣವನ್ನು ನೀಡದೇ ವರ್ಗಾವಣೀಯ ಲಿಖಿತ ಅಧಿನಿಯಮ ಕಲಂ 138 ರ ಅಡಿಯಲ್ಲಿ ಅಪರಾಧವನ್ನು ನನ್ನ ಸಂಜ್ಞೆಯಲ್ಲಿ ಎಸಗಿರುತ್ತೀರಿ.

ಪ್ರಶ್ನೆ 1ಃ-	ನಿಮಗೆ ಓದಿ ಹೇಳಿದ ಆರೋಪಣೆ ಅರ್ಥವಾಯಿತೇ?

ಉತ್ತರಃ	ತಿಳಿಯಿತು.

ಪ್ರಶ್ನೆ 2ಃ-	ಮೇಲಿನ ಆಪಾಧನೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗಬೇಕೆ?

ಉತ್ತರಃ	ವಿಚಾರಣೆಯಾಗಬೇಕು.

ಮೇಲಿನ ಆರೋಪಣೆಯನ್ನು ಆರೋಪಿಗೆ ಓದಿ ಹೇಳಿದ ನಂತರ ಅವರು ನೀಡಿದ ಉತ್ತರವನ್ನು ಸ್ವತಃ ನಾನೇ ಬರೆದುಕೊಂಡಿರುವುದು ನಿಜವೆಂದು ದೃಢೀಕರಿಸುತ್ತೇನೆ.

ದಿನಾಂಕ 07.03.2026

ಸಹಿ/- 07.03.2026
(ಶ್ರೀಮತಿ ನಂದಿನಿ ಎಂ.ಎನ್.)
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ.ಕೊಪ್ಪ